ರಾಜ್ಯದಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಕೊರತೆ

40 - ಶ್ರೀ ಚಿನ್ನಿಗಪ್ಪ (ಕೊರಟಗೆರೆ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಸಂಖ್ಯೆ ಎಷ್ಟು ?*

ಆ) *ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?*

ಈ) *ತುಮಕೂರು ಜಿಲ್ಲೆಯ ಕೊರಟಗೆರೆ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಕೊರತೆ ಇರುವ ಶಿಕ್ಷಕರ ಸಂಖ್ಯೆ ಎಷ್ಟು?*

ಉ) *ಶಿಕ್ಷಕರ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?*

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) 1. ಸರ್ಕಾರಿ ಪ್ರಾಥಮಿಕ ಶಾಲೆಗಳು : 42924

2. ಸರ್ಕಾರಿ ಪ್ರೌಢಶಾಲೆಗಳು : 2547

ಆ) ಬಂದಿದೆ.

ಇ) ಕೊರತೆ ಇರುವ ಖಾಲಿ ಶಿಕ್ಷಕ ಹುದ್ದೆಗಳಿಗೆ ಸರ್ಕಾರವು ಆಗಿಂದಾಗ್ಗೆ ನೇಮಕಾತಿ ಮೂಲಕ ಅರ್ಹ ಶಿಕ್ಷಕರನ್ನು ಆಯ್ಕೆ ಮಾಡಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಂಡಿದೆ.

ಈ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 33 ಸರ್ಕಾರಿ ಪ್ರೌಢ ಶಾಲೆಗಳಲ್ಲಿ 8

ಉ) ಶಿಕ್ಷಕರ ಕೊರತೆಯನ್ನು ನಿವಾರಿಸಲು ಸರ್ಕಾರವು ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿನ ಖಾಲಿ ಹುದ್ದೆಗಳನ್ನು ಅರ್ಹ ಅಭ್ಯರ್ಥಿಗಳನ್ನು ನೇಮಕಾತಿ ಮೂಲಕ ಆಯ್ಕೆ ಮಾಡಿ ಭರ್ತಿ ಮಾಡುತ್ತಿದೆ.

ರಾಜ್ಯದಲ್ಲಿ ಶಾಲಾ ವೇಳೆಗಳ ಬದಲಾವಣೆ

41 - ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ) : ಮಾನ್ಯ ಪ್ರಾಥಮಿ ಮತ್ತು ಪ್ರೌಢ ಶಿಕ್ಷಣ ಸಚಿವರು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಶಾಲಾ ಸಮಯವನ್ನು ಬದಲಾವಣೆ ಮಾಡುವ ಯೋಜನೆ ಸರ್ಕಾರದ ಮುಂದೆ ಇದೆಯೇ?*

ಆ) ಹಾಗಿದ್ದಲ್ಲಿ, ಎಂದಿನಿಂದ ಈ ಪದ್ಧತಿಯನ್ನು ಜಾರಿಗೆ ತರಲಾಗುವುದು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಇದೆ.

ಆ) ಮುಂದಿನ ಶೈಕ್ಷಣಿಕ ವರ್ಷದಿಂದ ಜಾರಿಗೆ ತರುವ ಉದ್ದೇಶವಿದೆ.

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದಲ್ಲಿ ಕಂಪ್ಯೂಟರೀಕರಣ

41 - ಶ್ರೀ ಸಭಾಪತಿ ಯು.ಆರ್. (ಉಡುಪಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕೇಂದ್ರ ಸರ್ಕಾರ ರಾಜ್ಯದ ಯಾವ ಯಾವ ಜಿಲ್ಲೆಗಳಿಗೆ ಪ್ರೌಢ ಶಿಕ್ಷಣದಲ್ಲಿ ಅಥವಾ ಪ್ರಾಥಮಿಕ ಶಿಕ್ಷಣದಲ್ಲಿ ಕಂಪ್ಯೂಟರ್ ಶಿಕ್ಷಣಕ್ಕಾಗಿ ಅನುದಾನವನ್ನು ಮಂಜೂರಾತಿ ನೀಡಿದೆ?*

ಆ) *ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣದಲ್ಲಿ ಕಂಪ್ಯೂಟರ್ ಶಿಕ್ಷಣದ ಬಗ್ಗೆ ಸರ್ಕಾರ ಹಾಕಿಕೊಂಡಿರುವ ಕಾರ್ಯಕ್ರಮಗಳೇನು? (ವಿವರ ನೀಡುವುದು)*

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಬೀದರ್ ಹಾಗೂ ಚಾಮರಾಜನಗರ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 25 ಜಿಲ್ಲೆಗಳಲ್ಲಿ 294 ಪ್ರೌಢ ಶಾಲೆಗಳಲ್ಲಿ ಕೇಂದ್ರ ಸರ್ಕಾರದ ಕ್ಲಾಸ್ ಪ್ರಾಜೆಕ್ಟ್ ಯೋಜನೆ ಅಡಿ ಕಂಪ್ಯೂಟರ್ ಶಿಕ್ಷಣವನ್ನು ಅನುಷ್ಠಾನಗೊಳಿಸಲು ಅನುದಾನ ನೀಡಲಾಗಿದೆ.

ಆ) 1998-99ನೇ ಸಾಲಿನಿಂದ ಕೇಂದ್ರ ಸರ್ಕಾರವು ಅನುದಾನವನ್ನು ರದ್ದುಗೊಳಿಸಿರುವ ಕಾರಣ ರಾಜ್ಯ ಸರ್ಕಾರವೇ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದೆ. 1998-99ನೇ ಸಾಲಿನಲ್ಲಿ 227.16 ಲಕ್ಷ ರೂ. ಹಾಗೂ 1999-2000ನೇ ಸಾಲಿನಲ್ಲಿ 200 ಲಕ್ಷ ರೂ.ಗಳನ್ನು ರಾಜ್ಯವು ಮಂಜೂರು ಮಾಡಿದೆ.

2000-2001ನೇ ಸಾಲಿನಿಂದ ಈ ಯೋಜನೆಯನ್ನು ಇನ್ನೂ ಹೆಚ್ಚಿನ ಶಾಲೆಗಳಿಗೆ ಹಂತ ಹಂತವಾಗಿ ವಿಸ್ತರಿಸಲು ಆಲೋಚಿಸಲಾಗಿದೆ. ಇದರ ಜೊತೆಗೆ ಕೇಂದ್ರ ಸರ್ಕಾರದ ಮೂಲಕ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಸಂಪೂರ್ಣವಾಗಿ ಕಂಪ್ಯೂಟರ್ ಸಾಕ್ಷಾರತಾ ಕಾರ್ಯಕ್ರಮವನ್ನು ಜಾರಿಗೊಳಿಸಲು ಯೋಜನಾ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ್ದು ಈ ಬಗ್ಗೆ ಕೇಂದ್ರ ಸರ್ಕಾರದ ನಿರ್ಧಾರವನ್ನು ಕಾಯಲಾಗುತ್ತಿದೆ.